## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | 752(1014) |
| ಸದಸ್ಯರ ಹೆಸರು : | ಶ್ರೀ ಟಿ.ಎ. ಶರವಣ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ : | 27.02.2022 |
| ಉತ್ತರಿಸುವವರು : | ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ನಗರ ಸಭೆಗಳು ಹಾಗೂ ನಗರಾಭಿವೃದ್ಧಿ ಇಲಾಖೆ ವ್ಯಾಪ್ತಿಯಲ್ಲಿ ಬರುವ ಸ್ಥಳೀಯ ಸಂಸ್ಥೆಗಳು ಆರ್ಥಿಕವಾಗಿ ಸಬಲರಾಗಲು ಸ್ವಂತ ಸಂಪನ್ಮೂಲ ಕ್ರೂಡೀಕರಿಸಲು ಕೊಟ್ಟಿರುವ ಅಧಿಕಾರಗಳೇನು; | ನಗರ ಸ್ಥಳೀಯ ಸಂಸ್ಥೆಗಳಿಗೆ ಆಸ್ತಿ ತೆರಿಗೆ ಸೇರಿದಂತೆ ನೀರಿನ ಶುಲ್ಕ, ಜಾಹೀರಾತು ಶುಲ್ಕ, ಉದ್ದಿಮೆ ಪರವಾನಿಗೆ ಶುಲ್ಕ ಅಂಗಡಿಗಳು/ಮಾರುಕಟ್ಟೆಗಳು/ವಾಣಿಜ್ಯ ಮಳಿಗೆಗಳಿಂದ ಬಾಡಿಗೆ ಸೇರಿದಂತೆ ಇತರೆ ಶುಲ್ಕಗಳನ್ನು ವಿಧಿಸಲು ಮುನಿಸಿಪಲ್ ಕಾಯ್ದೆಗಳಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ.<br>ನಗರ ಸ್ಥಳೀಯ ಸಂಸ್ಥೆಗಳು ಮುನಿಸಿಪಲ್ ಕಾಯ್ದೆಗಳಲ್ಲಿನ ಅವಕಾಶದಂತೆ ಹಾಗೂ ಸಂಬಂಧಿಸಿದ ಸರ್ಕಾರದ ಆದೇಶ/ಸುತ್ತೋಲೆಗಳ ಸೂಚನೆ/ ಷರತ್ತುಗಳಿಗೊಳಪಟ್ಟು ಬೈ-ಲಾಗಳನ್ನು ರಚಿಸಿಕೊಂಡು ಇತರೆ ಶುಲ್ಕಗಳನ್ನು/ದರಗಳನ್ನು ವಿಧಿಸಲು ಹಾಗೂ ಕಾಲಕಾಲಕ್ಕೆ ಅವುಗಳನ್ನು ಪರಿಷ್ಕರಿಸಲು ಅವಕಾಶವಿರುತ್ತದೆ. |
| ಆ) | ಈ ನಿಟ್ಟಿನಲ್ಲಿ ಸಂಸ್ಥೆಗಳ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆಯನ್ನು ಪರಿಷ್ಕರಣೆ ಮಾಡಲಾಗಿದೆಯೇ: (ವಿವರ ನೀಡುವುದು) | ನಗರ ಸ್ಥಳೀಯ ಸಂಸ್ಥೆಗಳನ್ನು ಆರ್ಥಿಕವಾಗಿ ಬಲಪಡಿಸುವ ನಿಟ್ಟಿನಲ್ಲಿ ಆಸ್ತಿ ತೆರಿಗೆ ಪದ್ಧತಿಯಲ್ಲಿ ಸುಧಾರಣಾ ಕ್ರಮಗಳನ್ನು ತರಲಾಗಿದೆ. ಅದರಂತೆ, ಚಾಲ್ತಿ ಸಾಲಿನ ಮಾರುಕಟ್ಟೆ ಮಾರ್ಗಸೂಚಿ ಬೆಲೆಗೆ ಅನುಗುಣವಾಗಿ ಆಸ್ತಿ ತೆರಿಗೆ ಜೋಡಣೆ ಮಾಡಲಾಗಿದೆ, ಅದರಂತೆ ಪ್ರತಿ ವರ್ಷ ಆಸ್ತಿ ತೆರಿಗೆ ಪರಿಷ್ಕರಣೆ ಮಾಡಬೇಕಾಗಿರುತ್ತದೆ.<br><br>ಈ ಹಿಂದೆ, ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ 2002-03ನೇ ಸಾಲಿನಿಂದ ಸ್ವಯಂ ಘೋಷಿತ ಆಸ್ತಿ ತೆರಿಗೆ ಪದ್ಧತಿಯಂತೆ, 2005-06ನೇ ಸಾಲಿನ ಮಾರುಕಟ್ಟೆ ಮಾರ್ಗಸೂಚಿ ಬೆಲೆಗಳ ಆಧಾರದ ಮೇಲೆ ಆಸ್ತಿ ತೆರಿಗೆಯನ್ನು ನಿರ್ಧರಣೆ ಮಾಡಲಾಗುತ್ತಿತ್ತು ಹಾಗೂ ಪ್ರತಿ ಮೂರು ವರ್ಷಗಳಿಗೊಮ್ಮೆ ಆಸ್ತಿ ತೆರಿಗೆಯನ್ನು ಪರಿಷ್ಕರಣೆ ಮಾಡಲಾಗುತ್ತಿತ್ತು. |
| ಇ) | ಸ್ಥಳೀಯ ಸಂಸ್ಥೆಗಳಲ್ಲಿ ಕುಡಿಯುವ ನೀರಿನ ದರ ಹೆಚ್ಚಿಸಲು ಉದ್ದೇಶಿಸಲಾಗಿದೆಯೇ? (ವಿವರಿಸುವುದು) | ಸರ್ಕಾರದ ಆದೇಶ ಸಂಖ್ಯೆ: ನಅಇ 07 ಯುಡಬ್ಲ್ಯೂಎಸ್ 2011 ಬೆಂಗಳೂರು, ದಿ: 20-07-2011ರಂತೆ ನೀರಿನ ದರಗಳನ್ನು ಪ್ರತಿ ಮೂರು ವರ್ಷಗಳಿಗೊಮ್ಮೆ ಪರಿಷ್ಕರಿಸಬೇಕಾಗಿರುತ್ತದೆ. |

ಸಂಖ್ಯೆ: ನಅಇ 333 ಜಿಇಎಲ್ 2022(ಇ)

(ಸಹಿ)

ಎನ್.ನಾಗರಾಜ್ (ಎಂ.ಟಿ.ಬಿ)

ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ

ಸಾರ್ವಜನಿಕ ವಲಯ ಉದ್ಯಮಗಳ ಸಚಿವರು